**Akashvani : Bangalore**
**Regional Bulletin In Kannada**
**24.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ರಾಜ್ಯದಲ್ಲಿ ೩೫ ಕೋವಿಡ್ ಸಕ್ರಿಯ ಪ್ರಕರಣ ; ಜನರು ಆತಂಕ ಪಡುವ ಅಗತ್ಯವಿಲ್ಲ - ಸಚಿವ ದಿನೇಶ್ ಗುಂಡೂರಾವ್

೨. ರಾಜ್ಯದಲ್ಲಿ ೬೦೦ ಕೋಟಿ ವೆಚ್ಚದ ಅನುಭವ ಮಂಟಪ ಮುಂದಿನ ವರ್ಷ ಲೋಕಾರ್ಪಣೆ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೩. ಬೆಂಗಳೂರಿನಲ್ಲಿ ಸುರಂಗ ಮಾರ್ಗ ನಿರ್ಮಾಣಕ್ಕೆ ಶೀಘ್ರವೇ ಟೆಂಡರ್ ಕರೆಯಲು ಸರ್ಕಾರ ನಿರ್ಧಾರ

೪. ನಾಳೆ ದೇಶ-ವಿದೇಶಗಳ ಭಾರತೀಯರೊಂದಿಗೆ ಪ್ರಧಾನಿ ಮನದ ಮಾತು

೫. ಕೇರಳ ಕರಾವಳಿ ಪ್ರವೇಶಿಸಿದ ಮುಂಗಾರು ; ರೈತರ ಮೊಗದಲ್ಲಿ ಮಂದಹಾಸ

**<><*<><>*><>**

ಕೋವಿಡ್-೧೯ ಈಗ ನಮ್ಮ ಜೀವನದ ಭಾಗ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಮತ್ತು ಬೆಂಗಳೂರಿನಲ್ಲಿ ಪ್ರಕರಣಗಳಲ್ಲಿ ಸ್ವಲ್ಪ ಏರಿಕೆ ಕಂಡುಬಂದರೂ, ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ಈ ವರ್ಷ ಇಲ್ಲಿಯವರೆಗೆ, ೩೫ ಪ್ರಕರಣಗಳು ವರದಿಯಾಗಿದ್ದು, ಕಳೆದ ೧೫ ದಿನಗಳಲ್ಲಿ ಸ್ವಲ್ಪ ಏರಿಕೆಯಾಗಿದೆ ಎಂದು ಹೇಳಿದ್ದಾರೆ. ಕಡಿಮೆ ರೋಗನಿರೋಧಕ ಶಕ್ತಿ ಹೊಂದಿರುವವರು, ಗರ್ಭಿಣಿಯರು ಮತ್ತು ಮಕ್ಕಳು ಜನದಟ್ಟಣೆಯ ಸ್ಥಳಗಳಿಗೆ ಭೇಟಿ ನೀಡುವಾಗ ಜಾಗರೂಕರಾಗಿರಬೇಕು. ಜನದಟ್ಟಣೆಯ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವಂತೆ ಸೂಚನೆ ನೀಡಿದ್ದಾರೆ. ತೀವ್ರ ಉಸಿರಾಟದ ಸೋಂಕು ಪ್ರಕರಣಗಳಿಗೆ ಮಾತ್ರ ಕೋವಿಡ್-೧೯ ಪರೀಕ್ಷೆಗಳು ಕಡ್ಡಾಯ ಎಂದು ಸಚಿವರು ತಿಳಿಸಿದ್ದಾರೆ.

**<><*<><>*><>**

ಸರ್ಕಾರ ಆರಂಭಿಸಿರುವ ೬೦೦ ಕೋಟಿಗೂ ಅಧಿಕ ವೆಚ್ಚದ ಅನುಭವ ಮಂಟಪವನ್ನು ಮುಂದಿನ ವರ್ಷ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾ ಆಯೋಜಿಸಿದ್ದ "ಬಸವ ಜಯಂತಿ-೨೦೨೫ ನಮ್ಮ ನಡೆ ಅನುಭವ ಮಂಟಪದ ಕಡೆ" ಕಾರ್ಯಕ್ರಮ ಉದ್ಘಾಟಿಸಿ ಮಾತಾನಾಡಿದ ಅವರು, ಬಸವಣ್ಣನವರು ಕ್ರಾಂತಿಪುರುಷ ಮಾತ್ರವಲ್ಲ, ವಿಶ್ವ ವಿಖ್ಯಾತ ಆರ್ಥಿಕ ತಜ್ಞರೂ ಆಗಿದ್ದರು. ಕಾಯಕ ಮತ್ತು ದಾಸೋಹದ ಶ್ರಮ ಸಂಸ್ಕೃತಿಯ ಮಹತ್ವವನ್ನು ಬಸವಣ್ಣ ಇಡೀ ವಿಶ್ವಕ್ಕೆ ನೀಡಿದರು ಎಂದು ಅಭಿಪ್ರಾಯಪಟ್ಟರು. ಕನ್ನಡ ಸಾಹಿತ್ಯದಲ್ಲಿ ವಚನ ಮತ್ತು ದಾಸ

ಸಾಹಿತ್ಯ ದೊಡ್ಡ ಮೈಲಿಗಲ್ಲು. ಅಕ್ಷರ ಸಂಸ್ಕೃತಿಯಿಂದ ವಂಚಿತರನ್ನಾಗಿ ಮಾಡಲಾಗಿದ್ದವರಿಗೆ ವಚನ ಸಾಹಿತ್ಯ ಆಡು ಮಾತಿನ ಮೂಲಕ ತಲುಪಿತು ಎಂದು ಹೇಳಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

**<><*<><>*><>**

"ಸಚಿವ ಸಂಪುಟ ಸಭೆಯಲ್ಲಿ ಬೆಂಗಳೂರಿನ ಎರಡು ಹಂತದ ಸುರಂಗ ರಸ್ತೆ ನಿರ್ಮಾಣಕ್ಕೆ ಅನುಮೋದನೆ ದೊರೆತಿದ್ದು, ಮೊದಲ ಹಂತದ ಯೋಜನೆಗೆ ಶೀಘ್ರವೇ ಟೆಂಡರ್ ಕರೆಯಲಾಗುವುದು" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು "ಬೆಂಗಳೂರಿನ ಸುರಂಗ ರಸ್ತೆಯ ಪ್ರವೇಶ ಹಾಗೂ ನಿರ್ಗಮನದ ಭಾಗದಲ್ಲಿ ಸಂಚಾರ ದಟ್ಟಣೆ ಆಗಬಾರದು ಎಂಬ ಉದ್ದೇಶದಿಂದ ಈ ಯೋಜನೆಗೆ ಟೆಂಡರ್ ಕರೆಯುವ ಮುನ್ನ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳ ಜತೆ ಸಭೆ ನಡೆಸಲಾಗಿದೆ" ಎಂದು ಮಾಹಿತಿ ನೀಡಿದರು. ªÀÄಬೆಂಗಳೂರಿನಲ್ಲಿ ೧೧೪ ಕಿ.ಮೀ ಎಲಿವೇಟೆಡ್ ಕಾರಿಡಾರ್ ನಿರ್ಮಾಣಕ್ಕೆ ತೀರ್ಮಾನ ಮಾಡಿದ್ದು, ಈ ಯೋಜನೆ ಸಂಬಂಧ ಸಂಚಾರ ಪೊಲೀಸ್ ಅಧಿಕಾರಿಗಳ ಅಭಿಪ್ರಾಯ ಪಡೆಯಲಾಗಿದೆ. ಕಾವೇರಿ ಆರತಿಗೆ "ಹರಿಯುವ ನೀರಿನಲ್ಲಿ ಕಾರ್ಯಕ್ರಮದ ವೇದಿಕೆ ನಿರ್ಮಿಸಲು ತೀರ್ಮಾನಿಸಿದ್ದು, ಈ ವೇದಿಕೆ ನಿರ್ಮಾಣಕ್ಕೂ ಶೀಘ್ರದಲ್ಲೇ ಟೆಂಡರ್ ಕರೆಯಲಾಗುವುದು" ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಅತೀ ಶೀಘ್ರವಾಗಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ಹಾಗೂ ಮಾಂಟೆಸ್ಸರಿ ತರಗತಿಗಳನ್ನು ಆರಂಭಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಪಂಚ ಗ್ಯಾರಂಟಿಗಳ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಚಿಕ್ಕಮಗಳೂರು ಜಿಲ್ಲೆಯ ೧೩೦ ಸರ್ಕಾರಿ ಅಂಗನವಾಡಿ ಕೇಂದ್ರಗಳಲ್ಲಿ ಈ ತರಗತಿಗಳನ್ನು ಆರಂಭಿಸಲಾಗುವುದು ಎಂದು ಹೇಳಿದ್ದಾರೆ. ಅಂಗನವಾಡಿಗಳಲ್ಲಿ ಮಕ್ಕಳಿಗೆ ಊಟ ನೀಡುವುದು ಮಾತ್ರವಲ್ಲ ಊಟದ ಜೊತೆಗೆ ಉತ್ತಮ ಶಿಕ್ಷಣವನ್ನು ನೀಡುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸಮಾವೇಶದಲ್ಲಿ ನೂರಕ್ಕು ಹೆಚ್ಚು ಅರ್ಹ ಮಹಿಳೆಯರಿಗೆ ಅಂಗನವಾಡಿ ಸಹಾಯಕ ಹಾಗೂ ಕಾರ್ಯಕರ್ತೆರಿಗೆ ಆಯ್ಕೆ ಪತ್ರಗಳನ್ನು ವಿತರಿಸಲಾಯಿತು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೨ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ನೀವು ಈ ಕಾರ್ಯಕ್ರಮವನ್ನು ಕೇಳಬಹುದು.

<><*<><>*><>

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ಕಾಂಗ್ರೆಸ್ ಕಾರ್ಯಕರ್ತರು ಘೇರಾವ್ ಹಾಕಿದ ಘಟನೆ ಖಂಡಿಸಿ ಕಲಬುರಗಿಯಲ್ಲಿಂದು ಬಿಜೆಪಿ ಪ್ರತಿಭಟನೆ ನಡೆಸಿತು. ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್, ಸಂಸದ ಗೋವಿಂದ ಕಾರಜೋಳ ಮತ್ತಿತರರು ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿ ಎನ್. ರವಿಕುಮಾರ್, ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗರು ಬಿಜೆಪಿ ಮುಖಂಡ ಛಲವಾದಿ ನಾರಾಯಣಸ್ವಾಮಿ ಅವರಿಗೆ ಘೇರಾವ್ ಹಾಕಿರುವುದು ದೌರ್ಜನ್ಯ ಪ್ರತೀಕವಾಗಿದೆ. ಈ ಸಂಬಂಧ ಪ್ರಿಯಾಂಕ್ ಖರ್ಗೆ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು. ಬಿಜೆಪಿ ನಾಯಕ ಸಿ.ಟಿ. ರವಿ ಮಾತನಾಡಿ, ಪ್ರಜಾಪ್ರಭುತ್ವದ ಮೇಲಿನ ದೌರ್ಜನ್ಯವನ್ನು ಎಂದಿಗೂ ಸಹಿಸಲಾಗದು ಎಂದು ತಿಳಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಕ್ಲಬ್, ಸ್ಪಾಗಳಲ್ಲಿ ಅಕ್ರಮ ಚಟುವಟಿಕೆ ತಡೆಯಲು ಹಾಗೂ ಐಪಿಎಲ್ ಬೆಟ್ಟಿಂಗ್ ಹಾವಳಿ ನಿಯಂತ್ರಿಸಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ ಎಂದು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ನಗರ ಸೇರಿದಂತೆ ವಿವಿಧೆಡೆ ಈಗಾಗಲೇ ಪೊಲೀಸರು ಕ್ಲಬ್‌ಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ಕೆಲವು ಕ್ಲಬ್‌ಗಳು ಕಾನೂನು ಕ್ರಮ ಉಲ್ಲಂಘಿಸಿರುವ ಬಗ್ಗೆ ಮಾಹಿತಿ ಬಂದಿದೆ. ಅವುಗಳ ಪರವಾನಗಿಯನ್ನು ರದ್ದುಗೊಳಿಸಲು ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ಮಲ್ಲಿಕಾರ್ಜುನ ಬಾಲದಂಡಿ, ಎಸ್ಪಿ**

<><*<><>*><>

ಕಾರವಾರ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿ ವ್ಯಾಪ್ತಿಯಲ್ಲಿನ ಎಲ್ಲಾ ಸೇತುವೆಗಳ ದೃಡತೆಯ ಬಗ್ಗೆ ಸಂಪೂರ್ಣ ವರದಿ ನೀಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ ನೀಡಿದ್ದಾರೆ. ಪ್ರಸ್ತುತ ಜಿಲ್ಲೆಯಲ್ಲಿ ಪೂರ್ವ ಮುಂಗಾರು ಆರಂಭಗೊಂಡಿದ್ದು, ವಾಡಿಕೆಯಂತೆ ಜುಲೈ ತಿಂಗಳಲ್ಲಿ ಅತೀ ಹೆಚ್ಚಿನ ಮಳೆಯಾಗುವ ಸಾಧ್ಯತೆಗಳಿದೆ. ಹೀಗಾಗಿ ಜಿಲ್ಲೆಯ ಹೆದ್ದಾರಿಗಳಲ್ಲಿ ಸುರಕ್ಷಿತ ಸಂಚಾರ ಕುರಿತಂತೆ ಮುನ್ನೆಚ್ಚರಿಕೆ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

<><*<><>*><>

ನೈಋತ್ಯ ಮುಂಗಾರು ಇಂದು ಕೇರಳ ಪ್ರವೇಶಿಸಿದೆ. ಈ ಬಾರಿ ೮ ದಿನ ಮುಂಚಿತವಾಗಿಯೇ ಕೇರಳ ಪ್ರವೇಶಿಸಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇಂದಿನಿಂದ ಮುಂದಿನ ೪ ದಿನಗಳವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ. ಕೊಡಗು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಲಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಇಂದಿನಿಂದ ಮುಂದಿನ ೪ ದಿನಗಳ ಕಾಲ ಮಳೆಯಾಗಲಿದೆ. ಉತ್ತರಕನ್ನಡ ಜಿಲ್ಲೆಯ ಕ್ಯಾಸಲ್ ರಾಕ್, ಕೊಟ್ಟಿಗೆಹಾರ ತಲಾ ೧೬ ಸೆಂಟಿಮೀಟರ್ ಮಳೆಯಾಗಿದೆ. ಭಾಗಮಂಡಲದಲ್ಲಿ ೧೦, ಬೆಳ್ತಂಗಡಿಯಲ್ಲಿ ೯ ಸೆಂಟಿ ಮೀಟರ್ ಮಳೆ ದಾಖಲಾಗಿದೆ.

<><*<><>*><>

ದಕ್ಷಿಣಕನ್ನಡ, ಉಡುಪಿ, ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದೆ. ಮಧ್ಯಾಹ್ನದಿಂದ  ನಿರಂತರ ಮಳೆ ಬೀಳುತ್ತಿದ್ದು ಇಂದು ಮತ್ತು ನಾಳೆ ಕೊಡಗು ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಕಾವೇರಿ, ಲಕ್ಷ್ಮಣತೀರ್ಥ ನದಿಗಳಲ್ಲಿಯೂ ನೀರಿನ ಮಟ್ಟದಲ್ಲಿ ಗಣನೀಯ ಏರಿಕೆಯಾಗಿದೆ. ತಲಕಾವೇರಿ, ಭಾಗಮಂಡಲದಲ್ಲಿಯೂ ಭಾರೀ ಮಳೆಯಾಗುತ್ತಿದೆ.

<><*<><>*><>

ರೈತರು ಉತ್ತಮ ಇಳುವರಿ ಪಡೆಯಲು ಡಿಎಪಿ ಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸಲು ಮುಂದಾಗಬೇಕು ಎಂದು ವಿಜಯನಗರ ಕೃಷಿ ಇಲಾಖೆ ಜಂಟಿ ನಿರ್ದೇಶಕ ಶರಣಪ್ಪ ಮುದಗಲ್ ತಿಳಿಸಿದ್ದಾರೆ. ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಅಗತ್ಯವಿದೆ. ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**